3/

ಕರ್ನಾಟಕ ಸರ್ಕಾರ

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.**

ಸಂಖ್ಯೆ:ಪಪೂಶಿಇ/ ಶೈ.ಶಾ-04/ಓ.ಓ.ಡಿ-22/2014-15 ದಿನಾಂಕ: 29.01.2015

ಸುತ್ತೋಲೆ

ವಿಷಯ: ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಏಳನೇ ಸಮ್ಮೇಳನಕ್ಕೆ ಉಪನ್ಯಾಸಕರು ಮತ್ತು ವಿಜ್ಞಾನ ಪದವಿ ವಿದ್ಯಾರ್ಥಿಗಳನ್ನು ನಿಯೋಜಿಸುವ ಬಗ್ಗೆ.

ಉಲ್ಲೇಖ: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸದಸ್ಯ ಕಾರ್ಯದರ್ಶಿಗಳು ಇವರ ಪತ್ರ ಸಂಖ್ಯೆ: ಕವಿತಂಅ/ಸಮ್ಮೇಳನ 2015, ದಿನಾಂಕ 14.01.2015.

******

ಮೇಲಿನ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ಏಳನೇ ಸಮ್ಮೇಳನವನ್ನು ಬೆಂಗಳೂರಿನ ಹೆಚ್.ಎಸ್.ಆರ್. ಲೇಔಟ್‌ನಲ್ಲಿರುವ ಆಕ್ಸ್‌ಫರ್ಡ್ ಕಾಲೇಜಿನ ಸಹಯೋಗದೊಂದಿಗೆ ದಿನಾಂಕ 05.02.2015ರಿಂದ 06.02.2015ರವರೆಗೆ "ವಿಜ್ಞಾನ, ತಂತ್ರಜ್ಞಾನ ಮತ್ತು ಉತ್ಪನ್ನೀಕರಣ -ಪ್ರಗತಿಗೆ ಒಂದು ಸಾಧನೆ" (Science, Technology & Productisation : A Means for Growth) ಎಂಬ ವಿಷಯವನ್ನು ಕುರಿತು ಸಮ್ಮೇಳನವನ್ನು ಅಯೋಜಿಸಲಾಗಿದೆ. ಸದರಿ ಸಮ್ಮೇಳನದಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಆಸಕ್ತ ವಿಜ್ಞಾನ ಉಪನ್ಯಾಸಕರನ್ನು ನಿಯೋಜಿಸುವಂತೆ ಕೋರಿರುತ್ತಾರೆ. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಲಾಗಿ ಈ ಕೆಳಕಂಡಂತೆ ಆದೇಶಿಸಿದೆ.

ಸದರಿ ಸಮ್ಮೇಳನದಲ್ಲಿ ಭಾಗವಹಿಸುವ ಉಪನ್ಯಾಸಕರಿಗೆ ಉಚಿತ ನೋಂದಣಿ, ಪ್ರಯಾಣ ಭತ್ಯೆ ಹಾಗೂ ವಸತಿಯನ್ನು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯಿಂದ ನೀಡಲಾಗುವುದು. ಸಮ್ಮೇಳನದಲ್ಲಿ ಭಾಗವಹಿಸಿದ ಉಪನ್ಯಾಸಕರು ಸಂಬಂಧಪಟ್ಟವರಿಂದ ಹಾಜರಾತಿ ಪ್ರಮಾಣ ಪತ್ರವನ್ನು ಪಡೆದು ತಮ್ಮ ಕಾಲೇಜಿನ ಪ್ರಾಂಶುಪಾಲರಿಗೆ ನೀಡತಕ್ಕದ್ದು. ಕಾರ್ಯಾಗಾರದಲ್ಲಿ ಭಾಗವಹಿಸಿದ ದಿನಕ್ಕೆ ಮಾತ್ರ ಅನ್ಯಕಾರ್ಯ ನಿಮಿತ್ತ ಸೌಲಭ್ಯ ನೀಡಲಾಗಿದೆ. ಸದರಿ ಕಾರ್ಯಾಗಾರದಲ್ಲಿ ಭಾಗವಹಿಸುವ ಉಪನ್ಯಾಸಕರುಗಳು ಆ ದಿನದಂದು ನಷ್ಟವಾಗುವ ತರಗತಿಯನ್ನು ರಜಾದಿನಗಳಂದು ಹೆಚ್ಚುವರಿಯಾಗಿ ತೆಗೆದುಕೊಂಡು ಸರಿದೂಗಿಸಬೇಕೆಂಬ ಷರತ್ತಿನೊಂದಿಗೆ ಅನುಮತಿಯನ್ನು ನೀಡಲಾಗಿದೆ.

ತಮ್ಮ ವಿಶ್ವಾಸಿ

ಜಂಟಿ ನಿರ್ದೇಶಕರು(ಶೈಕ್ಷಣಿಕ)

ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳನ್ನು:-

1. ರಾಮನಗರ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಿತ್ರದುರ್ಗ, ದಾವಣಗೆರೆ,ಕೋಲಾರ, ಶಿವಮೊಗ್ಗ ಹಾಗೂ ತುಮಕೂರು ಜಿಲ್ಲೆಗಳ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಆಸಕ್ತ ವಿಜ್ಞಾನ ಉಪನ್ಯಾಸಕರಗಳನ್ನು ನಿಯೋಜಿಸುವ ಕುರಿತು, ಮುಂದಿನ ಕ್ರಮಕ್ಕಾಗಿ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸದಸ್ಯ ಕಾರ್ಯದರ್ಶಿಗಳು, 'ವಿಜ್ಞಾನ ಭವನ', ನಂ 24/2, (ಬಿಡಿಎ ಕಾಂಪ್ಲೆಕ್ಸ್ ಹತ್ತಿರ), 2ನೇ ಮುಖ್ಯ ರಸ್ತೆ, ಬನಶಂಕರಿ 2ನೇ ಹಂತ, ಬೆಂಗಳೂರು-560070
3. ಅಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

100 OOD letter